ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

9

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ (ಅಕ್ರಮ ಗಣಿಗಾರಿಕೆ)

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 25/1/2021

# ಅಕ್ರಮ ಗಣಿಗಾರಿಕೆ ತಡೆಗೆ ಸಿಎಂ ಕಟ್ಟಪ್ಪಣೆ

ಶಿವಮೊಗ್ಗ: ರಾಜ್ಯಾದ್ಯಂತ ಹಲವೆಡೆ ನಡೆಯುತ್ತಿರುವ ಅಕ್ರಮ ಗಣಿಗಾರಿಕೆಗಳನ್ನು ತಕ್ಷಣವೇ ನಿಲ್ಲಿಸಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಯಡಿಯೂರಪ್ಪ ತಿಳಿಸಿದರು.

ನಗರದ ಹೆಲಿಪ್ಯಾಡ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಅಕ್ರಮ ಗಣಿಗಾರಿಕೆಗೆ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು. ಅಕ್ರಮ ಗಣಿಗಾರಿಕೆ ಸಕ್ರಮಗೊಳಿಸಲಾಗುವುದು ಎಂದು ಹೇಳಿಲ್ಲ. ಗಣಿಗಾರಿಕೆ ನಡೆಸುತ್ತಿರುವವರು ಪರವಾನಗಿಗೆ ಅರ್ಜಿ ಸಲ್ಲಿಸಿದ ಬಳಿಕ, ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಯಾರಿಗೂ ಅನಾನುಕೂಲ ಆಗದೇ ಇದ್ದರೆ ಕಾನೂನು ಚೌಕಟ್ಟಿನಲ್ಲಿ ಮಾತ್ರ ಅನುಮತಿ ನೀಡಬಹುದಾಗಿದೆ. ಆದರೆ, ಯಾವುದೇ ಕಾರಣಕ್ಕೂ ಅಕ್ರಮ ಗಣಿಗಾರಿಕೆಗೆ ಅವಕಾಶ ನೀಡಲಾಗುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ರಾಜ್ಯದ ಎಲ್ಲೆಡೆ ಅಕ್ರಮ ಗಣಿಗಾರಿಕೆ ಸಮಸ್ಯೆ ಇದೆ. ಮಂಡ್ಯದ ಬೇಬಿ ಬೆಟ್ಟದಲ್ಲಿ ಅಕ್ರಮ ಗಣಿಗಾರಿಕೆಯಿಂದ ಕೆಆರ್‌ಎಸ್ ಜಲಾಶಯಕ್ಕೆ ಧಕ್ಕೆ ಬರುವ ಆಪಾಯವಿದೆ. ಹಾಗಾಗಿ, ಈಗಾಗಲೇ ಸಂಪೂರ್ಣವಾಗಿ ನಿಲ್ಲಿಸುವಂತೆ ಸೂಚನೆ ನೀಡಲಾಗಿದೆ.



- ಅಕ್ರಮ ಗಣಿಗಾರಿಕೆ ನಿಲ್ಲಿಸಲು ಡಿಸಿಗಳಿಗೆ ಆದೇಶ
- ಕಾನೂನು ಚೌಕಟ್ಟಿನಲ್ಲಿ ಗಣಿಗಾರಿಕೆಗೆ ಅನುಮತಿ
- ಬೇಬಿಬೆಟ್ಟದಲ್ಲೂ ಅಕ್ರಮ ಗಣಿಗಾರಿಕೆಗೆ ತಡೆ

ಅಭಿವೃದ್ಧಿ ಕಾರ್ಯಗಳಿಗೆ ಜಲ್ಲಿ ಬೇಕು. ಕಾನೂನು ಚೌಕಟ್ಟಿನಲ್ಲಿ ಸರಬರಾಜು ಮಾಡಲು ಕ್ರಮ ಕೈಗೊಳ್ಳಬೇಕು. ಸಾಂಪ್ರದಾಯಿಕವಾಗಿ ಕಲ್ಲುಗಳನ್ನು ಒಡೆದು ಜಲ್ಲಿ ಮಾಡುವವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಅಭಿವೃದ್ಧಿ ಕಾಮಗಾರಿಗಳಿಗೆ ಜಲ್ಲಿ ಕೊರತೆಯಾಗದಂತೆ ನೋಡಿಕೊಳ್ಳಬೇಕು. ಅಕ್ರಮ ಗಣಿಗಾರಿಕೆ ನಡೆದರೆ ಸಂಬಂಧಪಟ್ಟ ಅಧಿಕಾರಿಗಳೇ ಜವಾಬ್ದಾರರು ಎಂದು ಅವರು ಎಚ್ಚರಿಸಿದರು.

## ಅಧಿಕಾರಿಗಳ ಅಮಾನತು

ಎಫ್‌ಡಿಎ ಪರೀಕ್ಷೆ ಪತ್ರಿಕೆ ಸೋರಿಕೆ ಕುರಿತು ಮಾಹಿತಿಯನ್ನು ಪಡೆದಿದ್ದೇನೆ. ಈ ಕುರಿತು ಸಮಗ್ರ ತನಿಖೆ ನಡೆಸಲಾಗುವುದು. ಪರೀಕ್ಷಾ ಅಕ್ರಮಕ್ಕೆ ಸಂಬಂಧಪಟ್ಟ ಅಧಿಕಾರಿಗಳನ್ನು ಸಸ್ಪೆಂಡ್ ಮಾಡಲಾಗಿದೆ. ಇದೊಂದು ಅಕ್ಷಮ್ಯ ಅಪರಾಧ. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಅಗತ್ಯಬಿದ್ದರೆ ಸಂಬಂಧಪಟ್ಟ ಅಧಿಕಾರಿಗಳನ್ನು ಸೇವೆಯಿಂದ ವಜಾಗೊಳಿಸಲಾಗುವುದು. ಜನವರಿ 26ರಂದು ರೈತರು ಶಾಂತ ರೀತಿಯಲ್ಲಿ ಪ್ರತಿಭಟಿಸಲು ಅವಕಾಶವಿದೆ. ನಮ್ಮ ಸರ್ಕಾರ ರೈತಪರವಾಗಿದೆ ಎಂದರು.